**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 2782/2021** **CW-2** **PW-2**

**ಸಾಕ್ಷಿಯನ್ನು ದಿಃ 22.04.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಸಾನಿಕ |
| ತಂದೆಯ ಹೆಸರುಃ | ಬಾಲಕೃಷ್ಣ |
| ವಯಸ್ಸುಃ | 18 ವರ್ಷ |
| ವೃತ್ತಿಃ | ದ್ವಿತೀಯ ಪಿಯುಸಿ ಮುಗಿಸಿರುತ್ತಾರೆ. |
| ವಾಸ ಸ್ಥಳಃ | ಕರಿಮಾರನಹಳ್ಳಿ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ -1 ನನ್ನ ತಾಯಿ. ಚಾಸಾ-3 ನನ್ನ ಅತ್ತೆ. ಚಾಸಾ-4 ಮತ್ತು ಚಾಸಾ-5 ರವರ ಪರಿಚಯವಿದೆ. ಆರೋಪಿ ನನ್ನ ತಂದೆ.

ಆರೋಪಿ ಮತ್ತು ಚಾಸಾ-1 ರವರಿಗೆ ನಾನು ಒಬ್ಬಳೇ ಮಗಳು. ದಿಃ 15.08.2021 ರ ಮದ್ಯಾಹ್ನ 3.30 ರ ಸಮಯದಲ್ಲಿ ನಾನು ಮತ್ತು ಚಾಸಾ-1 ರವರು ಮನೆಯಲ್ಲಿದ್ದಾಗ ಆರೋಪಿ ಅಲ್ಲಿಗೆ ಬಂದು ಚಾಸಾ-1 ರವರ ಭುಜ, ಹೊಟ್ಟೆಗೆ ಕೈಯಿಂದ ಹೊಡೆದಿರುತ್ತಾರೆ. ಅಲ್ಲದೇ ಮನೆಯಲ್ಲಿದ್ದ ವಸ್ತುಗಳನ್ನು ಚೆಲ್ಲಾಪಿಲ್ಲಿ ಮಾಡಿ ಹೊಡೆದು ಹಾಕಿರುತ್ತಾರೆ. ಆ ಸಮಯದಲ್ಲಿ ಎದುರುಮನೆಗಳಲ್ಲಿ ವಾಸವಿರುವ ಚಾಸಾ-3 ರಿಂದ ಚಾಸಾ-5 ರವರು ಬಂದು ಜಗಳ ಬಿಡಿಸಿರುತ್ತಾರೆ. ನಂತರ ಆರೋಪಿ ಚಾಸಾ-1 ರವರನ್ನು ಉದ್ದೇಶಿಸಿ ನಿನ್ನನ್ನು ಸಾಯಿಸದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ. ಈ ವಿಚಾರವನ್ನು ಚಾಸಾ-8 ರವರಿಗೆ ತಿಳಿಸಿರುತ್ತೇನೆ. ನಂತರ ಚಾಸಾ-8 ರವರು ಚಾಸಾ-1 ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಸಾಕ್ಷಿ ನ್ಯಾಯಾಲಯದಲ್ಲಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಈ ಸಂಬಂಧ ನಾನು ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿ ಚಾಸಾ-1 ರವರನ್ನು ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಡಿ ಬಿ ಕೆ ರವರಿಂದ ಃ**

ನಾನು 2021 ರಲ್ಲಿ ಕರಿಮಾರನಹಳ್ಳಿ ಯಲ್ಲಿ ವಾಸವಿದ್ದು, ನುಗ್ಗೆಹಳ್ಳಿಯ ಗೋಕುಲ ವಿದ್ಯಾ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದೆ. ಆ ಸಮಯದಲ್ಲಿ ನಾವು ಆರೋಪಿಯೊಂದಿಗೆ ವಾಸವಿದ್ದೆವು ಎಂದರೆ ಸರಿ. ಆಗ ಆರೋಪಿ ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಿದ್ದರು ಎಂದರೆ ಸರಿ. ವಿದ್ಯಾಭ್ಯಾಸದ ಖರ್ಚುಗಳನ್ನು ಆರೋಪಿ ನೊಡಿಕೊಳ್ಳುತ್ತಿದ್ದರು ಎಂದರೆ ಸರಿಯಲ್ಲ. ಆ ದಿನ ನಾನು ಶಾಲೆಗೆ ಹೋಗಿರಲಿಲ್ಲ. ಆ ದಿನ ಆರೋಪಿ ಮನೆಯಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ನಮ್ಮ ಮನೆ, ಚಾಸಾ-3 ಮತ್ತು ಚಾಸಾ-4 ರವರ ಮನೆ ಅಕ್ಕ ಪಕ್ಕ ಇದೆ. ಈ ಪ್ರಕರಣದಲ್ಲಿನ ದೂರಿನ ಬಗ್ಗೆ ನನಗೆ ಏನು ಗೊತ್ತಿಲ್ಲ ಎಂದರೆ ಸರಿ. ನನ್ನ ವಿದ್ಯಾಭ್ಯಾಸದ ವಿಚಾರಕ್ಕೆ ಗಲಾಟೆಯಾಗಿರುತ್ತದೆ. ಆರೋಪಿ ಚಾಸಾ-1 ರವರನ್ನು ಕೈಗಳಿಂದ ಹೊಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿ ಮನೆಯಲ್ಲಿರುವ ವಸ್ತುಗಳನ್ನು ಚೆಲ್ಲಾಪಿಲ್ಲಿ ಮಾಡಿಲ್ಲ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು, ಚಾಸಾ-1 ಮತ್ತು ಆರೋಪಿ ಮಾತ್ರ ಇದ್ದೆವು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನನ್ನ ಚಿಕ್ಕಮ್ಮ ಹೇಮಲತ ಸಹ ಇದ್ದರು ಎನ್ನುತ್ತಾರೆ. ನನ್ನ ಚಿಕ್ಕಮ್ಮ ಸುಮಾರು 10 ದಿನಗಳ ಕಾಲ ನಮ್ಮ ಮನೆಯಲ್ಲಿ ಇದ್ದರು. ಗ್ರಾಮದವರು ಬೇರೆ ಯಾರು ಅಲ್ಲಿ ಇರಲಿಲ್ಲ ಎಂದರೆ ಸರಿ. ನನ್ನ ತಂದೆ ಯಾವುದೇ ಗಲಾಟೆ ಮಾಡಿಲ್ಲ, ಕೊಲೆ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. ಗಲಾಟೆಯಾದ ನಂತರ ನಾವು ಮನೆಯಲ್ಲಿ ಇದ್ದೆವು ಎಂದರೆ ಸರಿ. ಚಾಸಾ-1 ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರಲಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರು ಹೇಳಿದಂತೆ ನಾನು ಕೇಳುತ್ತೇನೆ ಎಂದರೆ ಸರಿ. ನನ್ನ ತಾಯಿ

ಹೇಳಿಕೊಟ್ಟಂತೆ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲೀಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಹೇಳಿಕೆ ನೀಡಿಲ್ಲದಿದ್ದರೂ ನೀಡಿರುತ್ತೇನೆ ಎಂದು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ಘಟನೆ ನಡೆಯದಿದ್ದರೂ ಆರೋಪಿಯ ವಿರುದ್ಧ ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಚನ್ನರಾಯಪಟ್ಟಣದ ನ್ಯಾಯಾಲಯಗಳಲ್ಲಿ ಆಸ್ತಿ ವಿಚಾರವಾಗಿ ದಾವೆ ಹೂಡಿದ್ದೇನೆ ಎಂದರೆ ಸರಿ. ಆರೋಪಿಯಿಂದ ಆಸ್ತಿಯನ್ನು ಹೊಡೆದುಕೊಳ್ಳುವ ಉದ್ದೇಶದಿಂದ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಬೇರೆ ಮನೆ ಮಾಡುವಂತೆ ನಾನು ಮತ್ತು ಚಾಸಾ-1 ರವರು ಆರೋಪಿಗೆ ತೊಂದರೆ ನೀಡುತ್ತಿದ್ದೆವು ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ .)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**